ಇಲಾಖೆ / ವಿಷಯ : DEPARTMENT / SUBJECT: 28 ಗೃಹ - ...

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 3/3/21

# ಸಚಿವ ರಮೇಶ್ ಜಾರಕಿಹೊಳಿ ವಿರುದ್ಧ ಲೈಂಗಿಕ ಕಿರುಕುಳ ಆರೋಪ: ದೂರು

ಬೆಂಗಳೂರು: ರಮೇಶ್ ಜಾರಕಿಹೊಳಿ ಅವರದ್ದು ಎಂಬ ರಾಸಲೀಲೆಯ ವಿಡಿಯೋಗೆ ಸಂಬಂಧಿಸಿ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.



ಕೆಲಸ ಕೊಡಿಸುವ ನೆಪದಲ್ಲಿ ಯುವತಿಯನ್ನು ರಾಸಲೀಲೆಗೆ ಬಳಸಿಕೊಂಡಿದ್ದಾರೆ ಎಂದು ಆರೋಪಿಸಿ ದಿನೇಶ್ ಕಲ್ಲಹಳ್ಳಿ ಎಂಬ ಸಾಮಾಜಿಕ ಹೋರಾಟಗಾರ ದೂರು ನೀಡಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿ ಪ್ರತಿಕ್ರಿಯೆ ನೀಡಿರುವ ರಮೇಶ್ ಜಾರಕಿಹೊಳಿ, 'ಧಾರ್ಮಿಕತೆಯಲ್ಲಿ ನಂಬಿಕೆ ಇಟ್ಟಿರುವ ನಾನೇನೂ ತಪ್ಪು ಮಾಡಿಲ್ಲ. ನನ್ನ ತಪ್ಪಿದ್ದರೆ ಗಲ್ಲಿಗೇರಿಸಲಿ' ಎಂದು ಹೇಳಿದ್ದಾರೆ.

ರಾಸಲೀಲೆ ವಿಡಿಯೋ ವೈರಲ್ ಪ್ರಕರಣ ವಿಚಾರವಾಗಿ ಖಾಸಗಿ ಮಾಧ್ಯಮವೊಂದಕ್ಕೆ ಪ್ರತಿಕ್ರಿಯಿಸಿದ ರಮೇಶ್ ಜಾರಕಿಹೊಳಿ, 'ಆ ಯುವತಿ ಯಾರೋ ಎಂಬುದು ನನಗೆ ಗೊತ್ತಿಲ್ಲ. ಈ ಬಗ್ಗೆ ತನಿಖೆಯಾಗಲಿ. ನನ್ನ ಹತ್ತಿರ ಯಾರೂ ಬಂದಿಲ್ಲ. ಪಾಪ ಆಕೆ ಯಾವ ಹೆಣ್ಣುಮಗಳೋ ನನಗೋ ಗೊತ್ತಿಲ್ಲ . ಆ ಯುವತಿ ಯಾರೆಂದೇ ನನಗೆ ಗೊತ್ತಿಲ್ಲ. ಒಂದು ವೇಳೆ ನಾನು ತಪ್ಪು ಮಾಡಿದ್ದು ಸಾಬೀತಾದರೆ ರಾಜಕೀಯ ನಿವೃತ್ತಿ ಘೋಷಿಸುತ್ತೇನೆ. ಸಮಗ್ರ ತನಿಖೆಯಾಗಲಿ' ಎಂದು ಸಿಎಂಗೆ ಮನವಿ ಮಾಡುತ್ತೇನೆ ಎಂದಿದ್ದಾರೆ.